# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 71(112) |
| ಸದಸ್ಯರ ಹೆಸರು | : | ಡಾ. ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13-12-2021 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು. |

s

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರಿ ನೌಕರರಿಗೆ "ಜ್ಯೋತಿ ಸಂಜೀವಿನಿ" ಮೂಲಕ ವೈದ್ಯಕೀಯ ಸೌಲಭ್ಯವನ್ನು ಒದಗಿಸುವಂತೆ, ಅನುದಾನಿತ ಪ್ರಾಥಮಿಕ ಪ್ರೌಢ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಶಿಕ್ಷಕರಿಗೆ ಮತ್ತು ಉಪನ್ಯಾಸಕರಿಗೆ ವಿಸ್ತರಿಸಲು ಕ್ರಮವಹಿಸಲಾಗುವುದೇ: | ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲಾ/ಕಾಲೇಜುಗಳ ಶಿಕ್ಷಕರಿಗೂ 'ಜ್ಯೋತಿ ಸಂಜೀವಿನಿ" ಯೋಜನೆಯನ್ನು ವಿಸ್ತರಿಸುವ ಕುರಿತು ಮಾನ್ಯ ಸಚಿವರು, ಶಾಸಕರು, ಮತ್ತು ಕರ್ನಾಟಕ ವಿಧಾನ ಸಭೆ/ಪರಿಷತ್ತಿನ ಮಾನ್ಯ ಸದಸ್ಯರುಗಳು ಹಾಗೂ ಶಿಕ್ಷಕರ ಸಂಘಗಳಿಂದ ಹಲವಾರು ಮನವಿಗಳನ್ನು ಸ್ವೀಕರಿಸಲಾಗಿದೆ.<br><br>ಸರ್ಕಾರಿ ನೌಕರರು ಚಿಕಿತ್ಸೆ ಪಡೆದ ನಂತರ ಸದರಿ ಚಿಕಿತ್ಸಾ ಮೊತ್ತವನ್ನು ನಿಯಮಾನುಸಾರ ಪರಿಶೀಲಿಸಿ ಹಿಂಬರಿಸಲಾಗುತ್ತಿತ್ತು. ಪ್ರಸ್ತುತ ಜ್ಯೋತಿ ಸಂಜೀವಿನಿ ಯೋಜನೆಯಡಿ ನಗದು ರಹಿತ ಚಿಕಿತ್ಸೆಯನ್ನು ನೀಡಲಾಗುತ್ತಿದೆ. ಆದರೆ ಅನುದಾನಿತ ಶಾಲಾ ಕಾಲೇಜುಗಳ ಶಿಕ್ಷಕರು ಕರ್ನಾಟಕ ಶಿಕ್ಷಣ ಅಧಿನಿಯಮ-1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (classification, regulation and prescription of curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ.<br><br>ಮುಂದುವರೆದು, ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರು ಕರ್ನಾಟಕ ಸರ್ಕಾರಿ ನೌಕರರ(ವೈದ್ಯಕೀಯ ಹಾಜರಾತಿ) ನಿಯಮಗಳು-1963 ವ್ಯಾಪ್ತಿಗೆ ಒಳಪಡುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಹಾಗೂ ಸೇವಾ ಷರತ್ತು ಹಾಗೂ ನಿಬಂಧನೆಗಳು)ನಿಯಮಗಳು-1999ರ ನಿಯಮ-ii (3)ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಾಗಿರುವುದಿಲ್ಲ. ಆದುದರಿಂದ ಖಾಸಗಿ ಅನುದಾನಿತ ಶಿಕ್ಷಕರು ಜ್ಯೋತಿ ಸಂಜೀವಿನಿ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ. |
| ಆ | ಶಿಕ್ಷಕರಿಗೂ ವೈದ್ಯಕೀಯ ಸೌಲಭ್ಯವನ್ನು ವಿಸ್ತರಿಸಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು: | |
| ಇ | ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು? | ಉದ್ಭವಿಸುವುದಿಲ್ಲ |

ಇಪಿ 454 ಎಸ್ಇಎಸ್ 2021

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು